# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 30.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ರಾಜಕಾಲುವೆ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರೆಸಿದ್ದು, ದಿನಾಂಕ: 29.06.2011 ರಂದು ಬನ್ನೇರುಘಟ್ಟ ರಸ್ತೆಯ ಭುವನೇಶ್ವರಿನಗರದಲ್ಲಿ ಬೃಹತ್ ನೀರುಗಾಲುವೆ ಒತ್ತುವರಿ ಮಾಡಿಕೊಂಡು ನಿರ್ಮಿಸಿರುವ ಕಟ್ಟಡವನ್ನು ತೆರವುಗೊಳಿಸಲಾಯಿತು.

ದಾಸರಹಳ್ಳಿ ವಲಯದ ಕಮ್ಮಗೊಂಡನಹಳ್ಳಿ - ಅಬ್ಬಿಗೆರೆ ಮುಖ್ಯರಸ್ತೆಯಲ್ಲಿ ಹಾದುಹೋಗಿರುವ ಬೃಹತ್ ನೀರುಗಾಲುವೆಗೆ ಒತ್ತುವರಿಯನ್ನು ಮಾಡಿದ್ದ ಆಸ್ತಿಗಳನ್ನು ಗುರುತಿಸಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ದಿನಾಂಕ: 10.06.2011 ರಂದು ಒತ್ತುವರಿ ಭಾಗವನ್ನು ತೆರವುಗೊಳಿಸಲು ಉದ್ದೇಶಿಸಲಾಗಿತ್ತು. ಆದರೆ ಸದರಿ ಆಸ್ತಿಯವರ ಮಾಲೀಕರು ಸ್ವಇಚ್ಛೆಯಿಂದ ತೆರವುಗೊಳಿಸಿಕೊಡುವುದಾಗಿ ತಿಳಿಸಿ, ದಿನಾಂಕ: 15.06.2011 ರಂದು ಸ್ವಇಚ್ಛೆಯಿಂದ ಒತ್ತುವರಿ ಭಾಗವನ್ನು ತೆರವು ಕಾರ್ಯಾಚರಣೆಯನ್ನು ಪ್ರಾರಂಭಿಸಿರುತ್ತಾರೆ ಎಂದು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ), ದಾಸರಹಳ್ಳಿ ವಲಯ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**